# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ.ಬೆಂ.ವಿ.ವಿ/ ಆರ್.ಪಿ.ಎಸ್/ಇತರೆ/2016-17

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 07.03.2017

**ಸುತ್ತೋಲೆ**

ಕರ್ನಾಟಕ ಮಾಹಿತಿ ಆಯೋಗವು ಪ್ರಕರಣ ಕಮಾಆ/ 10/ 108 ಎಪಿಎಲ್ 2015 ರ ಆದೇಶದ ದಿನಾಂಕ 20.02.2017 ರಲ್ಲಿ ವಿಶ್ವವಿದ್ಯಾಲಯದ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ6 (1) ರಡಿಯಲ್ಲಿ ಸಲ್ಲಿಸುವ ಮಾಹಿತಿ ಕೋರಿಕೆ ಅರ್ಜಿಗಳಿಗೆ ಸರಿಯಾದ ಮಾಹಿತಿಯನ್ನು ನಿಗಧಿತ ಅವಧಿಯೊಳಗೆ ಒದಗಿಸದೇ ಇರುವುದನ್ನು ಗಂಭೀರವಾಗ ಪರಿಗಣಿಸಿದೆ. ಆಯೋಗದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಹಾಗೂ ಮಾಹಿತಿ ಕೋರಿ ಬರುವ ಅರ್ಜಿಗಳಿಗೆ ನಿಗಧಿತ ಅವಧಿಯೊಳಗೆ ನಿಯಮಾನುಸಾರ ಮಾಹಿತಿ ಒದಗಿಸುವಂತೆ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ನಿರ್ದೇಶಿಸಲಾಗಿದೆ.

ಆದ್ದರಿಂದ ವಿಶ್ವವಿದ್ಯಾಲಯದ ಎಲ್ಲಾ ಮಾಹಿತಿ ಅಧಿಕಾರಿಗಳು, ಸಹಾಯಕ ಮಾಹಿತಿ ಅಧಿಕಾರಿಗಳು ತಮ್ಮ ವಿಭಾಗಗಳಿಗೆ ಒಳಪಡುವ ವಿಷಯಗಳಿಗೆ ನಿಯಮಾನುಸಾರ ಪರಿಶೀಲಿಸಿ ನಿಗಧಿತ ಅವಧಿಯೊಳಗೆ ಸೂಕ್ತ ಮಾಹಿತಿಯನ್ನು ಅರ್ಜಿದಾರರಿಗೆ ಒದಗಿಸಲು ಹಾಗೂ ಆಯೋಗದಿಂದ ಸ್ವೀಕೃತವಾಗುವ ಆದೇಶಗಳಿಗೆ ಸೂಕ್ತ ಅನುಪಾಲನಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

ಕುಲಸಚಿವರು
ಮತ್ತು ಮೇಲ್ಮನವಿ ಪ್ರಾಧಿಕಾರಿ

ಗೆ,
ವಿಶ್ವವಿದ್ಯಾಲಯದ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಸಹಾಯಕ ಮಾಹಿತಿ ಅಧಿಕಾರಿಗಳು
ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.

ಪ್ರತಿ:

1. ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಗೇಟ್ ನಂ.2, 2ನೇ ಮಹಡಿ, ಬಹುಮಹಡಿ ಕಟ್ಟಡ ಡಾ: ಅಂಬೇಡ್ಕರ್ ರಸ್ತೆ, ಬೆಂಗಳೂರು-560 001.
2. ಕುಲಸಚಿವರು (ಮೌಲ್ಯಮಾಪನ) ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
3. ವಿತ್ತಾಧಿಕಾರಿಗಳೂ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
4. ಆಪ್ತ ಕಾರ್ಯದರ್ಶಿಗಳು, ಕುಲಪತಿಗಳ ಕಾರ್ಯಾಲಯ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.